59ಶ೬

(30)

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಚಲವಾದಿ ಟಿ ನಾರಾಯಣಸ್ವಾಮಿ, ಶ್ರೀ ಎಸ್.ಎಲ್ ಭೋಜೇಗೌಡ, ಶ್ರೀ ಎನ್ ರವಿಕುಮಾರ್ ಹಾಗೂ ಇತರರು ನಿಯಮ-330 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ.

ಸೂಚನೆ:-

ಪರಿಶಿಷ್ಟ ವರ್ಗಗಳ ಕಲ್ಯಾಣಕ್ಕಾಗಿ 2023-24 2024-25, 2025-26 ಮತ್ತು 2026-27ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ./ಟಿ.ಎಸ್.ಪಿ. ಯೋಜನೆಯಡಿ ಮೀಸಲಿಟ್ಟ ಅನುದಾನವನ್ನು ರಾಜ್ಯ ಸರ್ಕಾರವು ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕಾಗಿ ಬಳಕೆ ಮಾಡಿಕೊಂಡಿರುವುದರಿಂದ ಪರಿಶಿಷ್ಟ ವರ್ಗಗಳಿಗೆ ಅನ್ಯಾಯ ಮಾಡಿದಂತಾಗಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣಕ್ಕಾಗಿ ಮೀಸಲಿಟ್ಟ ಹಣವನ್ನು ಅನ್ಯ ಉದ್ದೇಶಗಳಿಗೆ ಬಳಸುವುದು ಎಸ್.ಸಿ.ಎಸ್.ಪಿ./ಟಿ.ಎಸ್.ಪಿ. ಯೋಜನೆಯ ದುರ್ಬಳಕೆಯಾಗುವುದಲ್ಲದೆ, ಸಂವಿಧಾನದ ಆಶಯಗಳಿಗೆ ದ್ರೋಹ ಮಾಡಿದಂತಾಗುತ್ತದೆ ಹಾಗೂ ಎಸ್.ಸಿ.ಎಸ್.ಪಿ./ಟಿ.ಎಸ್.ಪಿ. ಕಾಯ್ದೆಯ ಉಲ್ಲಂಘನೆಯಾಗುತ್ತದೆ ಹಾಗೂ ಸಂವಿಧಾನ ವಿರೋಧಿ ನಡೆಯಾಗುತ್ತದೆ. ಪರಿಶಿಷ್ಟ ವರ್ಗಗಳ ಶ್ರೇಯೋಭಿವೃದ್ಧಿಗಾಗಿ ಬಳಕೆ ಮಾಡಬೇಕಾದ ಅನುದಾನವನ್ನು ಅನ್ಯ ಯೋಜನೆಗಳಿಗೆ ಬಳಕೆ ಮಾಡುವುದರಿಂದ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ಕುಂಠಿತವಾಗುತ್ತಿದೆ. ಎಸ್.ಸಿ.ಎಸ್.ಪಿ./ಟಿ.ಎಸ್.ಪಿ. ಯೋಜನೆಯಡಿ ಮೀಸಲಿಟ್ಟ ಅನುದಾನವನ್ನು ಯಾವುದೇ ಕಾರಣಕ್ಕೂ ಬೇರೆ ಉದ್ದೇಶಗಳಿಗೆ ವರ್ಗಾವಣೆ ಮಾಡುವುದಿಲ್ಲ ಎಂದು ಆಶ್ವಾಸನೆ ನೀಡಿದ್ದ ಸರ್ಕಾರವು, ಒಟ್ಟು ರೂ.53,000 ಕೋಟಿಗೂ ಅಧಿಕ ಮೊತ್ತವನ್ನು ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ವರ್ಗಾವಣೆ ಮಾಡುವ ಮೂಲಕ ಪರಿಶಿಷ್ಟ ವರ್ಗಗಳ ಶ್ರೇಯೋಭಿವೃದ್ಧಿಗೆ ಅಪಾಯವನ್ನುಂಟುಮಾಡಿದೆ. ಆದ್ದರಿಂದ, ಅನ್ಯ ಉದ್ದೇಶಗಳಿಗೆ ಹಾಗೂ ವಿವಿಧ ಯೋಜನೆಗಳ ಅನುಷ್ಠಾನಕ್ಕೆ ಬಳಕೆ ಮಾಡಿರುವ ಹಣವನ್ನು ಮತ್ತೇ ಎಸ್.ಸಿ.ಎಸ್.ಪಿ./ಟಿ.ಎಸ್.ಪಿ. ಯೋಜನೆಯಡಿ ಪರಿಶಿಷ್ಟ ವರ್ಗಗಳ ಶ್ರೇಯೋಭಿವೃದ್ಧಿಗೆ ವಿನಿಯೋಗಿಸಲು ಸರ್ಕಾರವು ಮರು ಮಂಜೂರು ಮಾಡಲು ಅಗತ್ಯ ಕ್ರಮ ಕೈಗೊಳ್ಳಬೇಕು. ಅಲ್ಲದೆ, ಮುಂದಿನ ದಿನಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಸಮುದಾಯಗಳಿಗೆ ಯಾವುದೇ ರೀತಿಯ ಅನ್ಯಾಯವಾಗದಂತೆ ಸೂಕ್ತ ಕ್ರಮಗಳನ್ನು ಕೈಗೊಳ್ಳುವಂತೆ ಸರ್ಕಾರದ ಗಮನ ಸೆಳೆಯುವ ನಿಟ್ಟಿನಲ್ಲಿ ಈ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸಲು ಬಯಸುತ್ತೇವೆ.

ಉತ್ತರ:

2023-24, 2024-25 2025-26 ಮತ್ತು 2026-27 ನೇ ಆರ್ಥಿಕ ವರ್ಷದಲ್ಲಿ SCP ಹಾಗೂ TSP ಅಡಿಯಲ್ಲಿ ಮೀಸಲಿಡಲಾದ ಅನುದಾನದಲ್ಲಿ ಗ್ಯಾರಂಟಿ ಯೋಜನೆಗಳಿಗೆ ಒದಗಿಸಲಾದ ಅನುದಾನದ ವಿವರಗಳು ಈ ಕೆಳಕಂಡಂತಿವೆ.

ರೂ. ಕೋಟಿಗಳಲ್ಲಿ

| ವರ್ಷ | ಹಂಚಿಕೆ | | | ಈ ಪೈಕಿ ಗ್ಯಾರಂಟಿ ಯೋಜನೆಗಳಿಗೆ ಹಂಚಿಕೆ ಮಾಡಿರುವ ಮೊತ್ತ | | |
|---|---|---|---|---|---|---|
| | SCSP | TSP | ಒಟ್ಟು | SCSP | TSP | ಒಟ್ಟು |
| 2023-24 | 25163.71 | 10058.13 | 35221.84 | 7,148.78 | 3,207.54 | 10,356.32 |
| 2024-25 | 28669.22 | 11288.55 | 39957.77 | 9780.87 | 4212.12 | 13,992.99 |
| 2025-26 | 30,651.50 | 11,880.79 | 42,532.30 | 3945.66 | 3,931.12 | 13,476.78 |
| 2026-27 ಜುಲೈ 2026 ರ ಅಂತ್ಯಕ್ಕೆ | 32,787.63 | 13,306.39 | 46,094.02 | 10,201.72 | 3997.21 | 14,198.93 |
| | ಒಟ್ಟು | | | 36,677.03 | 15,347.99 | 52,025.02 |

ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಧಿನಿಯಮ 2013ರ ಸೆಕ್ಷನ್ 7 (ಸಿ) ಪ್ರಕಾರ ಸಾಮಾನ್ಯ ಸಾಮಾಜಿಕ ವಲಯದ ಕಾರ್ಯ ಕ್ರಮಗಳಿಗೆ ಹಂಚಿಕೆಯಾಗುವ ಅನುದಾನದಲ್ಲಿ ಎಸ್.ಸಿ/ಎಸ್.ಟಿ ಫಲಾನುಭವಿಗಳ ಜನಸಂಖ್ಯೆಯ ಪ್ರಮಾಣಕ್ಕನುಗುಣವಾಗಿ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅಡಿಯಲ್ಲಿ ಅನುದಾನವನ್ನು ಹಲಚಿಕೆ ಮಾಡಿ ಉಪಯೋಗಿಸಲು ಅವಕಾಶ ಇರುತ್ತದೆ.

ಅದರಂತೆ ಪ್ರಾರಂಭದಿಂದಲೂ ಸದರಿ ಕಾಯ್ದೆಯ ಸೆಕ್ಷನ್ 7(ಸಿ) ಪ್ರಕಾರ ಶಿಕ್ಷಣ, ಆರೋಗ್ಯ, ಕೃಷಿ, ತೋಟಗಾರಿಕೆ, ನೀರಾವರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಯೋಜನಾ ಇಲಾಖೆ, ಇಂಧನ ಇಲಾಖೆ ಇತ್ಯಾದಿ ಇಲಾಖೆಗಳಲ್ಲಿ ಎಲ್ಲರಿಗೂ ಅನ್ವಯವಾಗುವ ಯೋಜನೆಗಳು ಜಾರಿಯಲ್ಲಿದ್ದು, ಸದರಿ ಯೋಜನೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳ ಸಮಗ್ರ ಅಭಿವೃದ್ಧಿಗಾಗಿ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅಡಿಯಲ್ಲಿ ಅನುದಾನವನ್ನು ಹಂಚಿಕೆ ಮಾಡಿ ಉಪಯೋಗಿಸಲಾಗುತ್ತಿದೆ.

ಅದರಂತೆ ಸಾಮಾಜಿಕ ವಲಯದ ಸಾಮಾನ್ಯ ಯೋಜನೆಗಳಾದ ಗ್ಯಾರಂಟಿ ಯೋಜನೆಗಳಡಿ ಎಸ್.ಸಿ/ಎಸ್.ಟಿ ಫಲಾನುಭವಿಗಳ ಜನಸಂಖ್ಯೆಗೆ ಅನುಗುಣವಾಗಿ ಎಸ್.ಸಿ.ಎಸ್.ಪಿ) ಟಿ.ಎಸ್.ಪಿ ಅನುದಾನವನ್ನು ಬಳಕೆ ಮಾಡಲಾಗುತ್ತಿದೆ.

ಸಂಖ್ಯೆ: STW/SECB/STC/200/2026

(ಟಿ. ರಘುಮೂರ್ತಿ)
ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಸಚಿವರು